# ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 16(50)

ಮಾನ್ಯ ಸದಸ್ಯರ ಹೆಸರು : ಶ್ರೀ ಎಸ್ ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸ ಬೇಕಾದ ದಿನಾಂಕ : 12.09.2022

ಉತ್ತರಿಸುವ ಸಚಿವರು : ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು .

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ನೌಕರರಿಗೆ ಹೆರಿಗೆ ರಜೆಯನ್ನು ನೀಡಲಾಗುತ್ತಿದೆಯೇ? | ಹೌದು |
| ಆ) | ರಾಜ್ಯದ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕರ್ತವ್ಯ ನಿರ್ಹಿಸುತ್ತಿರುವ ಮಹಿಳಾ ನೌಕರರಿಗೆ ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ನೀಡುತ್ತಿರುವ ಮಾದರಿಯಲ್ಲಿ ಹೆರಿಗೆ ರಜೆಯನ್ನು ನೀಡಲು ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ. | ಸರ್ಕಾರದ ಆದೇಶ ಸಂಖ್ಯೆ:ಆಇ 04ಸೇನಿಸೇ 2012, ದಿನಾಂಕ:14.06.2012ರಲ್ಲಿ ದಿನಾಂಕ:01.04.2012ರಿಂದ ಜಾರಿಗೆ ಬರುವಂತೆ 135 ದಿನಗಳಿಂದ 180 ದಿನಗಳಿಗೆ ಹೆಚ್ಚಿಸಿ ಆದೇಶಿಸಿದ್ದು ಇದರನ್ವಯ ಕರ್ನಾಟಕ ಶಿಕ್ಷಣ ಕಾಯ್ದೆಯ ಶಿಕ್ಷಣ ಸಂಸ್ಥೆಗಳು (ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ) ನೇಮಕಾತಿ ಮತ್ತು ಸೇವಾ ಷರತ್ತು ಮತ್ತು (ನಿಬಂಧನೆಗಳು)ನಿಯಮ-1999ರಡಿಯಲ್ಲಿ ರಚಿತವಾಗಿರುವ ನಿಯಮ3(1)(ಬಿ)ರಂತೆ ಸರ್ಕಾರಿ ಶಿಕ್ಷಕರಿಗೆ ಕಾಲಕಾಲಕ್ಕೆ ನೀಡುವಂತಹ ಸೌಲಭ್ಯಗಳು ಅನುದಾನಿತ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ಅನ್ವಯವಾಗುವುದರಿಂದ ಅದೇ ಮಾದರಿಯಲ್ಲಿಯೇ 180 ದಿನಗಳ ಹೆರಿಗೆ ರಜೆಯನ್ನು ನೀಡಲಾಗುತ್ತಿದೆ. |
| ಇ) | ಈ ಮಹಿಳಾ ನೌಕರರಿಗೆ ಹೆರಿಗೆ ರಜೆಯನ್ನು ಯಾವ ಸಾಲಿನಿಂದ ಜಾರಗೆ ಬರುವಂತೆ ಆದೇಶ ಮಾಡಲಾಗಿದೆ? (ಮಾಹಿತಿ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ:ಆಇ 04 ಸೇನಿಸೇ 2012 ದಿನಾಂಕ:14.06.2012ರಲ್ಲಿ ದಿನಾಂಕ:01.04.2012ರಿಂದ ಅನ್ವಯವಾಗುವಂತೆ 135 ದಿನಗಳಿಂದ 180 ದಿನಗಳಿಗೆ ಹೆಚ್ಚಿಸಿ ಆದೇಶಿಸಲಾಗಿರುತ್ತದೆ. |

ಇಪಿ 352 ಎಸ್ಇಎಸ್ 2022

(ಬಿ.ಸಿ. ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ
ಹಾಗೂ ಸಕಾಲ ಸಚಿವರು